# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ :- 05/12/2020 ರಂದು ವಾರ್ಡ್-32ರ ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿ

**ಸಭೆಗೆ ಹಾಜರಿದ್ದ ಅಧಿಕಾರಿಗಳು :-**

1. ಶ್ರೀ. ಮಹಮ್ಮದ್ ಅಲಿ, ನೋಡಲ್ ಅಧಿಕಾರಿ
2. ಶ್ರೀ. ಬಸವರಾಜು, ವಾರ್ಡ್ ಸಹಾಯಕ ಅಭಿಯಂತರರು
3. ಶ್ರೀ. ಅನಿಲ್ ಪ್ರಭು ಹಿರಿಯ ಆರೋಗ್ಯ ಪರೀವಿಕ್ಷಕರು
4. ಶ್ರೀ. ದಯಾನಂದ, ಕಿರಿಯ ಆರೋಗ್ಯ ಪರೀವಿಕ್ಷಕರು.
5. ಶ್ರೀ. ಸ್ವಾಮಿ ಸ್ಟ್ರೀಟ್ ಲೈಟ್ ಸೂಪರ್‌ವೈಸರ್

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸದಸ್ಯ ಕಾರ್ಯದರ್ಶಿ ವಾರ್ಡ್-32 ರವರು ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿದರು. ವಾರ್ಡ್-32 ರ ವಾರ್ಡ್ ಸಮಿತಿ ಸಭೆಯನ್ನು ಎಲ್. ಆರ್. ಬಂಡೆ ವಾರ್ಡ್ ಕಛೇರಿಯಲ್ಲಿ ನಡೆಸಲಾಯಿತು. ನೋಡಲ್ ಅಧಿಕಾರಿಗಳು ವಾರ್ಡ್‌ನ ಸಾರ್ವಜನಿಕರ ಕುಂದು ಕೊರತೆಗಳು ಅಧಿಕಾರಿಗಳ ಜೋತೆಯಲ್ಲಿ ಚರ್ಚಿಸಿದರು. ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳವ ಬಗ್ಗೆ ಸಂಬಂದಪಟ್ಟ ಅಧಿಕಾರಿ ಹಾಗೂ ನೌಕರರುಗಳಿಗೆ ತಿಳಿಸಿರುತ್ತಾರೆ.

➢ **ಕಾಮಗಾರಿ ಇಲಾಖೆಗೆ ಸಂಬಂದಿಸಿರುವುದು**

1. ವಾರ್ಡ್ ವ್ಯಾಪ್ತಿಯಲ್ಲಿ ಸಂಗೀತ, ನಾಟಕ, ಇನ್ನೂ ಇತರೆ ಸಾಂಸ್ಕೃತಿಕ ಚಟುವಟಿಕೆಗಳು ನಡೆಸಲು ಯಾವುದೆ ಸ್ಥಳ ಅಥವಾ ರಂಗಮಂದಿರ ಕೊರತೆ ಇದ್ದು ಇಂತಹ ಕಾರ್ಯಕ್ರಮಗಳನ್ನು ನಿರ್ವಹಿಸಲು ಸೂಕ್ತ ಸ್ಥಳವನ್ನು ಸಾಂಸ್ಕೃತಿಕ ಸಂಘಕ್ಕೆ ತಿಳಿಸಲು ಸೂಚಿಸಿದರು.
2. ವಾರ್ಡ್ ವ್ಯಾಪ್ತಿಯಲ್ಲಿನ ಮುಖ್ಯ ರಸ್ತೆ ಗುಂಡಿಗಳನ್ನು ಮುಚ್ಚಲು ಕೂಡಲೆ ಕಾರ್ಯಾಚರಣೆ ಹೆಚ್ಚಿಸಲು ಸೂಚಿಸಿದರು.
3. ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಮತ್ತು ಫೂಟ್ ಪಾತ್ ಒತ್ತುವರಿಯನ್ನು ತೇರೆವುಗೊಳಿಸಲು ಕ್ರಮ ಬದ್ದವಾದ ವೇಳಾಪಟ್ಟಿಯೊಂದಿಗೆ ಕಾರ್ಯಾಚರಣೆ ನಡೆಸಲು ಸೂಚಿಸಿದರು.

**ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗಳಿಗೆ ಪರಿಹರಿಸುವಂತೆ ವಾರ್ಡ್ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.**

➢ **ಘನತ್ಯಾಜ್ಯ ಇಲಾಖೆಗೆ ಸಂಬಂದಿಸಿರುವುದು**

1. ವಾರ್ಡ್ ವ್ಯಾಪ್ತಿಯಲ್ಲಿ 4ನೇ ಮುಖ್ಯ ರಸ್ತೆ ಹೆಚ್.ಬಿ.ಆರ್ ಲೇಔಟ್‌ನಲ್ಲಿ ಹೊಸದಾಗಿ ಬ್ಲಾಕ್ ಸ್ಪಾಟ್ ಸೃಷ್ಟಿಯಾಗದಂತೆ ತ್ವರಿತವಾಗಿ ಕ್ರಮ ಕೈಗೋಳ್ಳಲು ಅಧಿಕಾರಿ ಹಾಗು ಸಿಬ್ಬಂದಿ ವರ್ಗದವರಿಗೆ ಸೂಚಿಸಿದರು.

ಕ್ರಮ ಹಿರಿಯ ಆರೋಗ್ಯ ಪರೀವಿಕ್ಷಕರು & ಕಿರಿಯ ಆರೋಗ್ಯ ಪರೀವಿಕ್ಷಕರು ಈ ಮೇಲೆ ಸೂಚಿಸಿರುವ ಸಮಸ್ಯೆಗಳಿಗೆ ಕೂಡಲೆ ಕ್ರಮ ವಹಿಸಲು ಸೂಚಿಸಿದರು.

➢ **ಕಂದಾಯ ಇಲಾಖೆಗೆ ಸಂಬಂಧಿಸಿರುವುದು**

1. ಸದರಿ ಇಲಾಖೆಗಳಿಗೆ ಸಂಬಂದಿಸಿದ ಪ್ರತಿನಿಧಿಗಳು ಸಭೆಗೆ ಹಾಜರಿರದ ಕಾರಣ ಈ ಹಿಂದಿನ ಸಭೆಗಳಲ್ಲಿ ಇಂತಹ ನಿರ್ಲಕ್ಷ ಧೋರಣೆಯಿಂದಾಗಿ ಸಭೆಗೆ ಹಾಜರಾಗದೆ ಇರುವುದರಿಂದ ಮೇಲಾಧಿಕಾರಿಗಳ ಗಮನಕ್ಕೆ ತರಲಾಗುವುದು ಎಂದು ಈ ಸಭೆ ಮುಖಾಂತರ ಸೂಚಿಸಲಾಯಿತು.

➢ **ಪೊಲೀಸ್ ಇಲಾಖೆಗೆ (ಸಿವಿಲ್) ಸಂಬಂದಿಸಿರುವುದು**

1. ವಾರ್ಡ್ ವ್ಯಾಪ್ತಿಯಲ್ಲಿ ಗಾಂಜಾ ಸೇವನೆ, ಮದ್ಯ ಕುಡಿಯುವುದು, ಕಳ್ಳರ ಹಾವಳಿ ಹೆಚ್ಚಾಗಿ ಕಂಡುಬಂದಿದ್ದು ಪೊಲೀಸ್ ಇಲಾಖೆ ಸಭೆಗೆ ಹಾಜಾರಾದೆ ಇರುವ ಕಾರಣದಿಂದ ಮುಂದಿನ ಸಭೆಯಲ್ಲಿ ಸಾರ್ವಜನಿಕರ ಕುಂದು ಕೊರತೆಗಳನ್ನು ಕೆಳಿಸಿಕೊಳ್ಳಲು ತಪ್ಪದೆ ಸಭೆಗೆ ಹಾಜರಾಲು ಸೂಚಿಸಿದೆ.

➢ **ಪೊಲೀಸ್ ಇಲಾಖೆಗೆ (ಟ್ರಾಫಿಕ್) ಸಂಬಂದಿಸಿರುವುದು**

1. ವಾರ್ಡ್ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ವಾಹನಗಳ ನೀಲುಗಡೆ, ನಿರ್ಜೀವವಾದ ವಾಹನಗಳ (Dead Vehical) ತೆರುವುಗೊಳಿಸುದು...ಇತೆರೆ ಸಮಸ್ಯೆಗಳು ಹಾಲಿಸಲು ಪೊಲೀಸ್ ಇಲಾಖೆ ಸಭೆಗೆ ಹಾಜಾರಾದೆ ಇರುವ ಕಾರಣದಿಂದ ಮುಂದಿನ ಸಭೆಯಲ್ಲಿ ಸಾರ್ವಜನಿಕರ ಕುಂದು ಕೊರತೆಗಳನ್ನು ಕೆಳಿಸಿಕೊಳ್ಳಲು ತಪ್ಪದೆ ಸಭೆಗೆ ಹಾಜರಾಲು ಸೂಚಿಸಿದೆ.

ಈ ಎಲ್ಲಾ ವಿಷಯಗಳ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಂಬಂದಪಟ್ಟವರಿಗೆ ಸೂಚಿಸುತ್ತಾ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದೆ.

ಸದಸ್ಯ ಕಾರ್ಯದರ್ಶಿ ವಾರ್ಡ್ –32

**ಪ್ರತಿಗಳನ್ನು:**

1. ಮಾನ್ಯ ಆಡಳಿತಾಧಿಕಾರಿರವರ ಅಪ್ತ ಶಾಖೆಗೆ ಸಲ್ಲಿಸಿ ಆಡಳಿತಾಧಿಕಾರಿರವರ ಗಮನಕ್ಕೆ ತರಲು ಕೊರಿದೆ.
2. ಮಾನ್ಯ ಆಯುಕ್ತರುರವರ ಅಪ್ತಶಾಖೆಗೆ ಸಲ್ಲಿಸಿ ಆಯುಕ್ತರವರ ಗಮನಕ್ಕೆ ತರಲು ಕೊರಿದೆ
3. ಮಾನ್ಯ ವಲಯ ಆಯುಕ್ತರುರವರ ಅಪ್ತಶಾಖೆಗೆ ಸಲ್ಲಿಸಿ ಆಯುಕ್ತರವರ ಗಮನಕ್ಕೆ ತರಲು ಕೊರಿದೆ.
4. ಮಾನ್ಯ ಜಂಟಿ ಆಯುಕ್ತರು (ಪೂರ್ವ) ರವರ ಅಪ್ತಶಾಖೆಗೆ ಸಲ್ಲಿಸಿ ಅಯುಕ್ತರವರ ಗಮನಕ್ಕೆ ತರಲು ಕೊರಿದೆ.
5. ಮುಖ್ಯ ಅಭೀಯಂತರರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಪುಲಿಕೇಶಿನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.

7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆ.ಜಿ.ಹಳ್ಳಿ ಉಪ-ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನ ತ್ಯಾಜ್ಯ) ಪುಲಕೇಶಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ಸಹಾಯಕ ಕಂದಾಯ ಅಧಿಕಾರಿ (ಕೆ.ಜಿ. ಹಳ್ಳಿ) ಉಪವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ನೇತಾಜಿ ರಸ್ತೆ, ರವರ ಮಾಹಿತಿಗಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರ ಮಾಹಿತಿಗಾಗಿ ಸಲ್ಲಿಸಿದೆ.
12. ಹಿರಿಯ ವೈಧ್ಯಾಧಿಕಾರಿಗಳು (ಪುಲಿಕೇಶಿನಗರ) ರವರ ಮಾಹಿತಿಗಾಗಿ ಸಲ್ಲಿಸಿದೆ
13. ಪೊಲೀಸ್ ಇನ್ಸ್‌ಪೆಕ್ಟರ್ (ಸಿವಿಲ್) ಕೆ.ಜಿ.ಹಳ್ಳಿ ರವರ ಮಾಹಿತಿಗಾಗಿ ಸಲ್ಲಿಸಿದೆ.
14. ಪೊಲೀಸ್ ಇನ್ಸ್‌ಪೆಕ್ಟರ್ (ಸಿವಿಲ್) ಆರ್.ಟಿ.ನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
15. ಪೊಲೀಸ್ ಇನ್ಸ್‌ಪೆಕ್ಟರ್ (ಟ್ರಾಫಿಕ್) ಕೆ.ಜಿ.ಹಳ್ಳಿ ರವರ ಮಾಹಿತಿಗಾಗಿ ಸಲ್ಲಿಸಿದೆ.
16. ಪೊಲೀಸ್ ಇನ್ಸ್‌ಪೆಕ್ಟರ್(ಟ್ರಾಫಿಕ್) ಆರ್.ಟಿ.ನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
17. ಸಹಾಯಕ ನಿರ್ದೇಶಕರು (ಪೂರ್ವ) ಪಶು ಪಾಲನೆ ಇಲಾಖೆ ರವರ ಮಾಹಿತಿಗಾಗಿ ಸಲ್ಲಿಸಿದೆ.
18. ವಲಯ ಅರಣ್ಯಾಧಿಕಾರಿಗಳು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ.
19. ಕಛೇರಿ ಪ್ರತಿ.